# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 761 |
| ಸದಸ್ಯರ ಹೆಸರು | : | ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 25-09-2020. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯಿತಿಗಳ ಅಧಿಕಾರದ ಅವಧಿ ಮುಕ್ತಾಯವಾಗಿರುವ ಹಿನ್ನಲೆಯಲ್ಲಿ ಗ್ರಾಮಗಳ ಜನರ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | 5 ವರ್ಷಗಳ ಅವಧಿ ಪೂರ್ಣಗೊಂಡಿರುವ ಗ್ರಾಮ ಪಂಚಾಯತಿಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 8(1)(ಬಿ)(ii) ರಂತೆ ಆಡಳಿತಾಧಿಕಾರಿಯನ್ನು ನೇಮಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಚಿಸಲಾಗಿದೆ. |
| (ಆ) | ಬೀದರ್ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆಯೇ; ಯಾವ ಯಾವ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆ; | ಬೀದರ್ ಜಿಲ್ಲೆಯಲ್ಲಿ ಅವಧಿ ಪೂರ್ಣಗೊಂಡಿರುವ 178 ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆ. |
| (ಇ) | ಗ್ರಾಮ ಪಂಚಾಯಿತಿಗಳಲ್ಲಿ ಆಡಳಿತಾಧಿಕಾರಿಗಳ ಪಾತ್ರವೇನು; ಅವರಿಗೆ ವಹಿಸಿರುವ ಕಾರ್ಯನಿರ್ವಹಣೆ ಯಾವುದು; | ಗ್ರಾಮ ಪಂಚಾಯತಿಯ ಆಡಳಿತಾಧಿಕಾರಿಯ ಅಧಿಕಾರ ಮತ್ತು ಕರ್ತವ್ಯಗಳು ಈ ಕೆಳಕಂಡಂತಿದೆ.<br>1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 8(4) ರನ್ವಯ ಆಡಳಿತಾಧಿಕಾರಿಯನ್ನು ಈ ಅಧಿನಿಯಮದ ಉದ್ದೇಶಕ್ಕಾಗಿ ಕ್ರಮಬದ್ಧವಾಗಿ ರಚಿಸಿದ ಗ್ರಾಮ ಪಂಚಾಯತಿ ಎಂದು ಭಾವಿಸಲಾಗಿದೆ.<br>2. ಸದರಿ ಅಧಿನಿಯಮದ ಪ್ರಕರಣ 8 (3) ರನ್ವಯ ಆಡಳಿತಾಧಿಕಾರಿಯು ಗ್ರಾಮ ಪಂಚಾಯತಿಯ ಎಲ್ಲಾ ಅಧಿಕಾರಗಳನ್ನು ಮತ್ತು ಕರ್ತವ್ಯಗಳನ್ನು ಚಲಾಯಿಸತಕ್ಕದ್ದು ಮತ್ತು ನೆರವೇರಿಸತಕ್ಕದ್ದಾಗಿದೆ.<br>3. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರನ್ವಯ ಗ್ರಾಮ ಪಂಚಾಯತಿಯ ಹಣಕಾಸಿನ ವ್ಯವಹಾರವನ್ನು ಆಡಳಿತಾಧಿಕಾರಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಜಂಟಿಯಾಗಿ ನಿರ್ವಹಿಸತಕ್ಕದ್ದು. |

| | | |
|---|---|---|
| | | 4. ವಾರ್ಡ್ ಸಭೆ ಮತ್ತು ಗ್ರಾಮ ಸಭೆಗಳನ್ನು ಕಾಲ ಕಾಲಕ್ಕೆ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.<br>5. ಅಧಿನಿಯಮದ ಪ್ರಕರಣ 58 ರಂತೆ ಗ್ರಾಮ ಪಂಚಾಯತಿ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.<br>6. ಅಧಿನಿಯಮದ ಪ್ರಕರಣ 60 ರಂತೆ ಗ್ರಾಮ ಪಂಚಾಯತಿಯ ಸಾಮಾನ್ಯ ಅಧಿಕಾರಗಳನ್ನು ಚಲಾಯಿಸತಕ್ಕದ್ದು.<br>7. ಅಧಿನಿಯಮದ ಪ್ರಕರಣ 62 ರಂತೆ ಅಧ್ಯಕ್ಷನ ಪ್ರಕಾರ್ಯಗಳು ಮತ್ತು ಅಧಿಕಾರಗಳನ್ನು ಚಲಾಯಿಸತಕ್ಕದ್ದು.<br>8. ಕೋವಿಡ್-19 (ಕೋರೊನಾ ವೈರಸ್) ಹರಡದಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆಯನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 86 ಉಖಾಯೋ 2019 ದಿನಾಂಕ:27-03-2020 ರಚಿಸಲಾಗಿದ್ದು, ಆಡಳಿತಾಧಿಕಾರಿಯು ಅಧ್ಯಕ್ಷರಾಗಿರು-ವುದರಿಂದ ಸದರಿ ಕಾರ್ಯಪಡೆಯ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.<br>9. ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲಾಗಿದ್ದು, ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆ ಮಾಡತಕ್ಕದ್ದು ಮತ್ತು ಗ್ರಂಥಾಲಯ ಮೇಲ್ವಿಚಾರಕರಿಗೆ ಗೌರವಧನವನ್ನು ಮಾಸಿಕವಾಗಿ ಪಾವತಿಸತಕ್ಕದ್ದು.<br>10. ಗ್ರಾಮ ಪಂಚಾಯತಿ ನೌಕರರಿಗೆ ಮಾಸಿಕವಾಗಿ ಕನಿಷ್ಠ ವೇತನ ಪಾವತಿಸತಕ್ಕದ್ದು.<br>11. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 74 ಗ್ರಾಪಂಸಿ 2017 (ಭಾಗ-1) ದಿನಾಂಕ:12-03-2018 ರಲ್ಲಿ ಗ್ರಾಮ ಪಂಚಾಯಿತಿಗಳು ಯಾವುದೇ ಹುದ್ದೆಗಳಿಗೆ ನೇಮಕಾತಿ ಮಾಡುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ಆಡಳಿತಾಧಿಕಾರಿಯು ಗ್ರಾಮ ಪಂಚಾಯತಿಗೆ ಯಾವುದೇ ನೌಕರರನ್ನು ನೇಮಕ ಮಾಡಿಕೊಳ್ಳತಕ್ಕದ್ದಲ್ಲ. |
| (ಈ) | ಗ್ರಾಮ ಪಂಚಾಯಿತಿಗಳಿಗೆ ನಿಗದಿತ ಅವಧಿಯೊಳಗೆ ಚುನಾವಣೆ ನಡೆಸಲಾಗುವುದೇ; ಈ ದಿಶೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? | ರಾಜ್ಯ ಚುನಾವಣಾ ಆಯೋಗವು, ಅವಧಿ ಮುಕ್ತಾಯವಾಗುವ ಗ್ರಾಮ ಪಂಚಾಯತಿಗಳಿಗೆ ಚುನಾವಣೆ ನಡೆಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದ್ದು ಪ್ರಸ್ತುತ ಕೋವಿಡ್ ಹಿನ್ನೆಲೆಯಲ್ಲಿ ಚುನಾವಣೆ ನಡೆಸುವ ಬಗ್ಗೆ ಸೂಕ್ತ ಸಮಯದಲ್ಲಿ ತೀರ್ಮಾನಿಸಿ ಚುನಾವಣೆಯನ್ನು ಘೋಷಿಸುತ್ತದೆ. |

ಸಂ. ಗ್ರಾಅಪ 729 ಗ್ರಾಪಂಅ 2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು